ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಂಸತ್ತಿನ ಬಜೆಟ್ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE 02/03/2020

## ಇಂದಿನಿಂದ ಅಧಿವೇಶನದ ದ್ವಿತೀಯಾರ್ಧ ಆರಂಭ

ಉ.ವಾ. 2/3/20

ನವದೆಹಲಿ: ಸಂಸತ್‌ನ ಬಜೆಟ್ ಅಧಿವೇಶನದ ದ್ವಿತೀಯಾರ್ಧ ಸೋಮವಾರ ಆರಂಭವಾಗಲಿದ್ದು, ದೆಹಲಿ ಹಿಂಸಾಚಾರವನ್ನೇ ಚರ್ಚೆಯ ಪ್ರಧಾನ ವಿಷಯವಾಗಿಟ್ಟುಕೊಂಡು ಕೇಂದ್ರ ಗೃಹ ಸಚಿವ ಅಮಿತ್ ಶಾ ರಾಜೀನಾಮೆಗೆ ಆಗ್ರಹಿಸಲು ಪ್ರತಿಪಕ್ಷ ಕಾಂಗ್ರೆಸ್ ಸಿದ್ಧತೆ ನಡೆಸಿದೆ. ದೆಹಲಿ ಗಲಭೆ ಕುರಿತು ಚರ್ಚೆಗೆ ಅವಕಾಶ ನೀಡುವಂತೆ ಸಂಸತ್‌ನ ಎರಡೂ ಸದನಗಳಲ್ಲೂ ನಿಲುವಳಿ ಸೂಚನೆ ಮಂಡಿಸಲು ಕಾಂಗ್ರೆಸ್ ನಿರ್ಧರಿಸಿದೆ. ರಾಜಧಾನಿಯಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವಲ್ಲಿ ಸರ್ಕಾರ ವಿಫಲವಾಗಿದೆ ಎಂದಿರುವ ಕಾಂಗ್ರೆಸ್ ನಾಯಕ ಅಧೀರ್ ರಂಜನ್ ಚೌಧರಿ, 'ಗಲಭೆಕೋರರು ಮತ್ತು ಪೊಲೀಸರ ಒಂದು ವರ್ಗದ ನಡುವೆ ನಂಟಿರುವ ಬಗ್ಗೆ ಅನುಮಾನಗಳಿವೆ' ಎಂದಿದ್ದಾರೆ.